ಪಿ.ಡಬ್ಲ್ಯು 1

(ದಿನಾಂಕ 27-11-2023 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಫಿರ್ಯಾದಿಯ ಪ್ರಮಾಣೀಕೃತ ಹೇಳಿಕೆ**

ನಾನು ಈ ಪ್ರಕರಣದಲ್ಲಿ ಫಿರ್ಯಾದಿದಾರನಾಗಿದ್ದು, ನನ್ನ ಪ್ರಮಾಣೀಕೃತ ಹೇಳಿಕೆಯ ಪ್ರಮಾಣಪತ್ರವನ್ನು ಈಗಾಗಲೇ ಸಲ್ಲಿಸಿದ್ದು, ಅದರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇದೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ. ನಾನು ನನ್ನ ಫಿರ್ಯಾದಿಯ ಜೊತೆ ಕೆಲವು ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಈಗಾಗಲೇ ನಿ.ಪಿ. 1 ರಿಂದ 7 ಎಂದು ಗುರುತಿಸಲಾಗಿದ್ದು, ಸಾಕ್ಷಿಯು ನಿ.ಪಿ. 1 ರಿಂದ 7 ನ್ನು ನೋಡಿ ಗುರುತಿಸಿರುತ್ತಾರೆ.

ದಿಃ 16-01-2023 ರಂದು ಆರೋಪಿಯು ನೀಡಿರುವ ಚೆಕ್‌ನ್ನು ನಿ.ಪಿ.1 ಎಂದು, ಬ್ಯಾಂಕನವರು ನೀಡಿರುವ 2 ಹಿಂಬರಹಗಳನ್ನು ನಿ.ಪಿ. 2 ಮತ್ತು 3 ಎಂದು, ದಿನಾಂಕ 09-02-2023 ರಂದು ಆರೋಪಿಗೆ ನೀಡಿರುವ ನೋಟಿಸ್‌ನ ಕಚೇರಿ ಪ್ರತಿಯನ್ನು ನಿ.ಪಿ. 4 ಎಂದು, ಆರೋಪಿಗೆ ನೋಟಿಸ್ ನೀಡಿದ ಬಗ್ಗೆ ಅಂಚೆ ರಶೀದಿಯನ್ನು ನಿ.ಪಿ. 5 ಎಂದು, ಆರೋಪಿಗೆ ನೋಟಿಸ್ ಜಾರಿಯಾದ ಬಗ್ಗೆ ಅಂಚೆ ಸ್ವೀಕೃತಿಯನ್ನು ನಿ.ಪಿ. 6 ಎಂದು, ಸಾಲದ ಖಾತೆಯ ಉತಾರಿನ ದೃಢೀಕೃತ ಪ್ರತಿಯನ್ನು ನಿ.ಪಿ. 7 ಎಂದು, ಫಿರ್ಯಾದನ್ನು ನಿ.ಪಿ. 8 ಎಂದು ಈಗಾಗಲೇ ನಿಶಾನೆಯನ್ನಾಗಿ ಗುರುತಿಸಲಾಗಿದ್ದು, ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಗೆ ನಿ.ಪಿ. 1 ನ್ನು ತೋರಿಸಲಾಗಿ ಅದರಲ್ಲಿರುವ ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು, ಆರೋಪಿ ಪರ ವಕೀಲರು ಸದರಿ ಸಹಿಯನ್ನು ಗುರುತಿಸಲು ತಕರಾರು ಸಲ್ಲಿಸಿದ್ದು, ತಕರಾರಿಗೆ ಒಳಪಟ್ಟು ನಿ.ಪಿ. 1(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿ.ಪಿ. 6 ನ್ನು ತೋರಿಸಲಾಗಿ ಅದರಲ್ಲಿರುವ ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು, ಆರೋಪಿ ಪರ ವಕೀಲರು ಸದರಿ ಸಹಿಯನ್ನು ಗುರುತಿಸಲು ತಕರಾರು ಸಲ್ಲಿಸಿದ್ದು, ತಕರಾರಿಗೆ ಒಳಪಟ್ಟು ನಿ.ಪಿ. 6(ಎ) ಎಂದು ಗುರುತಿಸಲಾಯಿತು.

ನನ್ನ ಸಾಕ್ಷಿ ವಿಚಾರಣೆ ಹಾಗೂ ದಾಖಲಾತಿಗಳ ಆಧಾರದ ಮೇಲೆ ಫಿರ್ಯಾದಿಯಲ್ಲಿ ಕೇಳಿರುವಂತೆ ಆದೇಶವಾಗಲು ಪ್ರಾರ್ಥನೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಜೆ. ಎಂ. ಎಫ್. ಸಿ. ಕುಮಟಾ